**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,ರವರ ನ್ಯಾಯಾಲಯ, ಕಡೂರು.</u>**

**<u>ಸಿ.ಸಿ. ಸಂಖ್ಯೆ.779/2023</u>**

**<u>ಫಿರ್ಯಾದುದಾರರು</u>** ಃ ಸರ್ಕಾರದ ಪರವಾಗಿ ಕಡೂರು ಪೊಲೀಸರಿಂದ

**-ವಿರುದ್ದ-**

<u>ಆರೋಪಿ</u> ಃ ಮಧು ಹೆಚ್.ಬಿ. ಬಿನ್ ಲೇಟ್ ಬಸಪ್ಪ, 34 ವರ್ಷಗಳು, ವಾಸಃ ಹುಲಿಗೊಂದಿ ಗ್ರಾಮ, ವೈ.ಮಲ್ಲಾಪುರ ಅಂಚೆ, ಕಡೂರು ತಾಲ್ಲೂಕು.

**<u>-ಃ ಆ ಪಾ ದ ನೆಃ-</u>**

ದಿನಾಂಕ 18.08.2022 ರಂದು ಸಂಜೆ ಸುಮಾರು 6-00 ಗಂಟೆ ಸಮಯದಲ್ಲಿ ಕಡೂರು ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ದೊಡ್ಡಪಟ್ಟಣಗೆರೆ ಗ್ರಾಮದಲ್ಲಿರುವ ದಿನೇಶರವರ ಅಂಗಡಿ ಸಮೀಪ ಚಾಸಾ-1 ಗುರುಮೂರ್ತಿ ರವರ ತಂದೆ ನಾಗರಾಜುರವರು ರಸ್ತೆ ಪಕ್ಕ ನಿಂತುಕೊಂಡಿದ್ದಾಗ, ಆರೋಪಿಯಾದ ನೀವು ಕಡೂರು ಕಡೆಯಿಂದ ಕೆಎ 18/ಸಿ-4943 ರ ಮಾರುತಿ ಸ್ವಿಫ್ ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಹಾಗೂ ನಿರ್ಲಕ್ಷ್ಯತನದಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ವಾಹನವನ್ನು ಚಾಲನೆ ಮಾಡಿಕೊಂಡು ಬಂದು ರಸ್ತೆ ಪಕ್ಕದಲ್ಲಿ ನಿಂತಿದ್ದ ನಾಗರಾಜುರವರಿಗೆ ಡಿಕ್ಕಿ ಹೊಡೆಸಿರುತ್ತೀರಿ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆಯ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ 18/ಸಿ-4943 ಮಾರುತಿ ಸ್ವಿಫ್ಟ್ ಕಾರನ್ನು ಚಲಾಯಿಸಿಕೊಂಡು ಬಂದು ರಸ್ತೆ ಪಕ್ಕದಲ್ಲಿ ನಿಂತಿದ್ದ ನಾಗರಾಜುರವರಿಗೆ ಡಿಕ್ಕಿಪಡಿಸಿದ ಪರಿಣಾಮ, ಅವರ ತಲೆ ಹಾಗೂ ಎಡಭುಜಕ್ಕೆ ತೀವ್ರ ಸ್ವರೂಪದ ಗಾಯಗಳಾಗಿದ್ದು ಶಿವಮೊಗ್ಗದ ನ್ಯೂರೋ ಭಾರತ್ ಎಂಬ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡುವಾಗ ದಿನಾಂಕ 22.08.2022 ರಂದು ಬೆಳಿಗ್ಗೆ 9.20 ಗಂಟೆಗೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆಯ ಕಲಂ 304(ಎ)ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

ಕೊನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲ್ಕಂಡ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ಅಪಘಾತಪಡಿಸಿ, ಅಪಘಾತದ ಕುರಿತು ಪೋಲೀಸರಿಗೆ ಮಾಹಿತಿ ನೀಡದೆ ಹಾಗೂ ಗಾಯಾಳುವನ್ನು ಚಿಕಿತ್ಸೆಗೆ ಒಳಪಡಿಸದೇ ಸ್ಥಳದಿಂದ ಪರಾರಿಯಾಗಿರುತ್ತೀರಿ.

ಆದ್ದರಿಂದ ನೀವು ಮೋಟಾರು ವಾಹನ ಕಾಯ್ದೆ ಕಲಂ 187 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುತ್ತೀರಿ.

1. ನಿಮಗೆ ಈಗ ಓದಿ ಹೇಳಿದ ಆರೋಪವು ತಿಳಿಯಿತೆ?

ಉಃ ತಿಳಿಯಿತು.

2. ನಿಮ್ಮ ಮೇಲೆ ಇರುವ ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉಃ ನಾನು ಯಾವುದೇ ತಪ್ಪು ಮಾಡಿಲ್ಲ, ವಿಚಾರಣೆ ಆಗಬೇಕು.

ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ದಿನಾಂಕಃ 03 ನೇ ಅಕ್ಟೋಬರ್ 2023.

ಸಹಿ-

**(ರಾಮ್ ಪ್ರಶಾಂತ್ ಎಂ.ಎನ್.),**
ಪ್ರಧಾನ ಪ್ರದನ್ಯಾದಂ**.,** ಕಡೂರು**.**